ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 789
ಸದಸ್ಯರ ಹೆಸರು : ಶ್ರೀ ಎಂ.ಸಿ. ವೇಣುಗೋಪಾಲ್
ಉತ್ತರಿಸುವ ದಿನಾಂಕ : 17.12.2018
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯೊಳಗೆ ಬರುವ ಶಾಲೆ/ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ಶಾಲೆಗಳ ಮೂಲ ಉದ್ದೇಶವೇನು; ಹಾಗೂ ಪ್ರವೇಶಾತಿ ವಿಧಾನ ಯಾವುದು;</td><td>ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಡಿಯಲ್ಲಿ ಬರುವ ವಸತಿ ಶಾಲೆಗಳ ವಿವರ ಕೆಳಕಂಡಂತಿವೆ.
<table>
<tr><th>ಕ್ರ.ಸಂ</th><th>ಇಲಾಖೆ</th><th>ವಸತಿ ಶಾಲೆಗಳ ಸಂಖ್ಯೆ</th></tr>
<tr><td>1</td><td>ಸಮಾಜ ಕಲ್ಯಾಣ ಇಲಾಖೆ</td><td>68</td></tr>
<tr><td>2</td><td>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ</td><td>119</td></tr>
<tr><td>3</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ</td><td>779</td></tr>
</table>
ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳಿಗೆ ಉತ್ತಮ ಮತ್ತು ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ.
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿಯಲ್ಲಿ ಬರುವ ವಸತಿ ಶಾಲೆಗಳಿಗೆ 6ನೇ ತರಗತಿಗೆ ಆಯ್ಕೆ ಪರೀಕ್ಷೆ, ಅರ್ಹತೆ ಮತ್ತು ಮೀಸಲಾತಿ ನಿಯಮದನ್ವಯ ಪ್ರವೇಶಾತಿ ಕಲ್ಪಿಸಲಾಗಿದೆ.
ಅಲೆಮಾರಿ/ಅರೆ ಅಲೆಮಾರಿ /ಆಶ್ರಮ ಶಾಲೆ ವಿದ್ಯಾರ್ಥಿಗಳಿಗೆ/ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಪ್ರವೇಶ ಪರೀಕ್ಷೆ ಇಲ್ಲದೇ ನೇರವಾಗಿ ಪ್ರವೇಶಾತಿ ಕಲ್ಪಿಸಲಾಗುತ್ತಿದೆ.
ಸಮಾಜ ಕಲ್ಯಾಣ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸುವ ವಸತಿ ಶಾಲೆಗಳ ಪ್ರವೇಶಕ್ಕೆ ಯಾವುದೇ ಪ್ರವೇಶ ಪರೀಕ್ಷೆ ಇಲ್ಲದೇ ನೇರವಾಗಿ ಪ್ರವೇಶಾತಿ ಕಲ್ಪಿಸಲಾಗಿದೆ.</td></tr>
<tr><td>ಆ)</td><td>ಸದರಿ ಶಾಲೆಗಳಲ್ಲಿ ಮಕ್ಕಳಿಗೆ ವಿಧಿಸುತ್ತಿರುವ ಶುಲ್ಕವೆಷ್ಟು; (ತರಗತಿವಾರು ವಿವರ ನೀಡುವುದು)</td><td>ಈ ಶಾಲೆಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿಧಿಸುವುದಿಲ್ಲ.</td></tr>
<tr><td>ಇ)</td><td>ಪ್ರಸಕ್ತ ಸಾಲಿನಲ್ಲಿ ಸದರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ತರಗತಿವಾರು ವಿವರ ನೀಡುವುದು)</td><td>ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.</td></tr>
</table>

ಸಕಇ 612 ಪಕವಿ 2018

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.

(1)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:789 ಕ್ಕೆ ಅನುಬಂಧ

ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ

ಕ್ರ.ಸಂ	ವಿವರ	ಸಮಾಜ ಕಲ್ಯಾಣ ಇಲಾಖೆ	ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
1	1ನೇ ತರಗತಿ	661	1318	–
2	2ನೇ ತರಗತಿ	1055	1568	–
3	3 ನೇ ತರಗತಿ	1343	1889	–
4	4 ನೇ ತರಗತಿ	1562	2103	–
5	5 ನೇ ತರಗತಿ	1659	2162	–
6	6 ನೇ ತರಗತಿ	–	666	39373
7	7 ನೇ ತರಗತಿ	–	631	38597
8	8 ನೇ ತರಗತಿ	–	14	24364
9	9ನೇ ತರಗತಿ	–	15	22240
10	10 ನೇ ತರಗತಿ	–	15	19221
ಒಟ್ಟು		6280	10381	143795